RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ



| ಭಾಗ - IV-A<br>Part - IV-A | ಬೆಂಗಳೂರು, ಶನಿವಾರ, ಫೆಬ್ರವರಿ ೨೨, ೨೦೧೪ (ಫಾಲ್ಗುಣ ೩, ಶಕ ವರ್ಷ ೧೯೩೫)<br>Bangalore, Saturday, February 22, 2014 (Phalguna 3, Shaka Varsha 1935) | ನಂ. ೧೪೮<br>No. 148 |
|---|---|---|



ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಂವ್ಯಶಾಇ 59 ಶಾಸನ 2013, ಬೆಂಗಳೂರು, ದಿನಾಂಕ: 22.02.2014

**ಹೈದ್ರಾಬಾದ್-ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ನಿರಸನ ವಿಧೇಯಕ, 2014ಕ್ಕೆ** 2014ರ ಫೆಬ್ರವರಿ ತಿಂಗಳ ಇಪ್ಪತ್ತನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2014ರ ಕರ್ನಾಟಕ ಅಧಿನಿಯಮ ಸಂಖ್ಯೆ: 09 ಎಂಬುದಾಗಿ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**2014ರ ಕರ್ನಾಟಕ ಅಧಿನಿಯಮ ಸಂಖ್ಯೆ: 9**

(2014ರ ಫೆಬ್ರವರಿ ತಿಂಗಳ ಇಪ್ಪತ್ತೆರಡನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಹೈದರಾಬಾದ್- ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ನಿರಸನ ಅಧಿನಿಯಮ, 2014**

(2014ರ ಫೆಬ್ರವರಿ ತಿಂಗಳ ಇಪ್ಪತ್ತನೇ ದಿನಾಂಕದಂದು ರಾಜ್ಯಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)

ಹೈದರಾಬಾದ್ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಅಧಿನಿಯಮ, 1991ನ್ನು (1991ರ ಕರ್ನಾಟಕ ಅಧಿನಿಯಮ 35) ನಿರಸನಗೊಳಿಸಲು ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡು ಬರುವ ಉದ್ದೇಶಗಳಿಗಾಗಿ, ಹೈದರಾಬಾದ್ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಅಧಿನಿಯಮ, 1991ನ್ನು (1991ರ ಕರ್ನಾಟಕ ಅಧಿನಿಯಮ 35) ನಿರಸನಗೊಳಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತೈದನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಹೈದರಾಬಾದ್- ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ನಿರಸನ ಅಧಿನಿಯಮ, 2014 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. ನಿರಸನ ಮತ್ತು ಉಳಿಸುವಿಕೆಗಳು.-** (1) ಹೈದರಾಬಾದ್-ಕರ್ನಾಟಕ ಪ್ರಾಂತ್ಯ ಅಭಿವೃದ್ಧಿ ಮಂಡಳಿ ಆದೇಶ, 2013ರ ಕಂಡಿಕೆ 3ರ ಅಡಿಯಲ್ಲಿ ಹೈದರಾಬಾದ್ ಕರ್ನಾಟಕ ಪ್ರಾಂತ್ಯ ಅಭಿವೃದ್ಧಿ ಮಂಡಳಿಯನ್ನು ಸ್ಥಾಪಿಸುವ

ಅಧಿಸೂಚನೆಯ ದಿನಾಂಕದಂದು ಮತ್ತು ಅಂದಿನಿಂದ, ಹೈದರಾಬಾದ್ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಅಧಿನಿಯಮ, 1991 (1991ರ ಕರ್ನಾಟಕ ಅಧಿನಿಯಮ 35) ನಿರಸನಗೊಳ್ಳತಕ್ಕದ್ದು.

(2) ಅಂಥ ನಿರಸನದ ಪರಿಣಾಮವಾಗಿ,-

(i) ಹೈದರಾಬಾದ್ – ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಎಲ್ಲಾ ಸ್ವತ್ತುಗಳು ಮತ್ತು ಹೊಣೆಗಾರಿಕೆಗಳು, ಹೈದರಾಬಾದ್ – ಕರ್ನಾಟಕ ಪ್ರಾಂತ್ಯ ಅಭಿವೃದ್ಧಿ ಮಂಡಳಿಗೆ ವರ್ಗಾವಣೆಯಾಗತಕ್ಕದ್ದು;

(ii) ಹೈದರಾಬಾದ್ – ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯಲ್ಲಿ ಮಂಜೂರಾದ ಹುದ್ದೆಗಳೊಂದಿಗೆ ಎಲ್ಲಾ ಸಿಬ್ಬಂದಿ ವರ್ಗದವರು ಹೈದರಾಬಾದ್-ಕರ್ನಾಟಕ ಪ್ರಾಂತ್ಯ ಅಭಿವೃದ್ಧಿ ಮಂಡಳಿಯು ಮಾರ್ಪಾಟುಗಳನ್ನು ಮಾಡುವವರೆಗೆ, ಅವರು ಯಾವ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ನೇಮಕಗೊಂಡಿರುವರೋ ಅವೇ ನಿಬಂಧನೆಗಳು ಮತ್ತು ಷರತ್ತುಗಳೊಂದಿಗೆ, ಹೈದರಾಬಾದ್-ಕರ್ನಾಟಕ ಪ್ರಾಂತ್ಯ ಅಭಿವೃದ್ಧಿ ಮಂಡಳಿಗೆ ವರ್ಗಾವಣೆಯಾಗತಕ್ಕದ್ದು;

(iii) ನಿರಸನಗೊಂಡ ಅಧಿನಿಯಮದ ಅಡಿಯಲ್ಲಿ ಮಾಡಲಾದ ಎಲ್ಲಾ ನಿಯಮಗಳು, ಅಧಿಸೂಚನೆಗಳು ಮತ್ತು ಆದೇಶಗಳು, ಹೈದರಾಬಾದ್- ಕರ್ನಾಟಕ ಪ್ರಾಂತ್ಯ ಅಭಿವೃದ್ಧಿ ಮಂಡಳಿ ಆದೇಶ, 2013ರ ಅಡಿಯಲ್ಲಿ ಹೊಸ ನಿಯಮಗಳು, ಅಧಿಸೂಚನೆಗಳು ಅಥವಾ ಆದೇಶಗಳನ್ನು ಮಾಡುವವರೆಗೆ, ಅವುಗಳನ್ನು ಸದರಿ ಆದೇಶದ ಅಡಿಯಲ್ಲಿ ಮಾಡಲಾಗಿದೆ ಎಂಬಂತೆಯೇ ಮುಂದುವರೆಯತಕ್ಕದ್ದು;

(iv) ಕರ್ನಾಟಕ ಸಾಮಾನ್ಯ ಖಂಡಗಳ ಅಧಿನಿಯಮ, 1899ರ (1899ರ ಕರ್ನಾಟಕ ಅಧಿನಿಯಮ 3) 6ನೇ ಪ್ರಕರಣವು ಅಂಥ ನಿರಸನಕ್ಕೆ ಅನ್ವಯವಾಗತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಎಸ್.ಬಿ. ಗುಂಜಿಗಾವಿ**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) (೮೦೦ ಪ್ರತಿಗಳು)